ಪ್ರತಿ ವಿಧಾನ ಸಭಾ ಕ್ಷೇತ್ರದಲ್ಲಿ ಕುಶಲ ಕರ್ಮಿಗಳಿಗೆ ಉಪಕರಣಗಳನ್ನು ತೆಗೆದು ಕೊಳ್ಳಲು ಸಹಾಯಧನ

326 - ಶ್ರೀ ಡಿ.ಆರ್. ಪಾಟೀಲ್ (ಗದಗ್) : ಮಾನ್ಯ ಸಣ್ಣ ಪ್ರಮಾಣದ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಪ್ರತಿ ವಿಧಾನ ಸಭಾ ಕ್ಷೇತ್ರದಲ್ಲಿ 1000 ಕುಶಲಕರ್ಮಿಗಳಿಗೆ ಆಯವ್ಯಯ ಭಾಷಣದಲ್ಲಿ ಕೊಟ್ಟ ಭರವಸೆಯಂತೆ ಉಪಕರಣಗಳನ್ನು ಕೊಳ್ಳಲು ಸಹಾಯ ಧನ ಕೊಡುವ ಕಾರ್ಯಕ್ರಮ ಯಾವಾಗ ಕಾರ್ಯಗತಗೊಳಿಸಲಾಗುವುದು;*

ಆ) *ಇದನ್ನು ಈ ಸಾಲಿನ ಸೆಪ್ಟೆಂಬರ್ ತಿಂಗಳೊಳಗಾಗಿ ಎಲ್ಲಾ ಕುಶಲಕರ್ಮಿಗಳಿಗೆ ಕೊಡುವ ಉದ್ದೇಶ ಸರ್ಕಾರಕ್ಕೆ ಇದೆಯೇ?*

ಶ್ರೀ ಎ.ಎಂ. ಹಿಂಡಸಗೇರಿ (ಸಣ್ಣ ಪ್ರಮಾಣದ ಕೈಗಾರಿಕಾ ಸಚಿವರು) :

ಅ) ಶೀಘ್ರದಲ್ಲಿಯೇ ಕಾರ್ಯಗತಗೊಳಿಸಲಾಗುವುದು.

ಆ) ಆರ್ಥಿಕ ವರ್ಷದ ಕೊನೆಯೊಳಗಾಗಿ.

ಗದಗ್ ನಗರದಲ್ಲಿ ಮೆಟ್ರಿಕ್ ನಂತರ ವಿದ್ಯಾರ್ಥಿನಿಲಯ ತೆಗೆಯುವ ಬಗ್ಗೆ

327 - ಶ್ರೀ ಡಿ.ಆರ್. ಪಾಟೀಲ್ (ಗದಗ್) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಗದಗ್ ನಗರದಲ್ಲಿ ಪೋಸ್ಟ್ ಮೆಟ್ರಿಕ್ ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಗೆ ಬೇರೆ ಬೇರೆ ವಸತಿ ನಿಲಯಗಳನ್ನು ಪ್ರಾರಂಭಿಸಲು ಸರ್ಕಾರ ಯಾವಾಗ ಮಂಜೂರಾತಿ ನೀಡುವುದು?*

ಆ) *ಈ ಶೈಕ್ಷಣಿಕ ವರ್ಷದಿಂದಲೇ ಪ್ರಾರಂಭಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?*

ಇ) *ಈ ಮೆಟ್ರಿಕ್ ನಂತರದ ಪರಿಶಿಷ್ಟ ಜಾತಿ:ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗಾಗಿ ಸರ್ಕಾರ ವಿದ್ಯಾರ್ಥಿ ನಿಲಯವನ್ನು ಗದಗ್ನಲ್ಲಿ ಪ್ರಾರಂಭಿಸುವುದೇ?*

ಈ) *ಹೋದ ವರ್ಷದಿಂದಲೇ ಈ ಬೇಡಿಕೆಗಳು ಸರ್ಕಾರದ ಮುಂದಿದ್ದರೂ ಈ ಬಗ್ಗೆ ವಿಳಂಬ ಮಾಡಲು ಕಾರಣಗಳೇನು?*

ಶ್ರೀ: ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು) :

ಅ) ಮತ್ತು ಆ) ಸರ್ಕಾರದ ಪರಿಶೀಲನೆಯಲ್ಲಿದೆ.

ಇ) ಪ್ರಸ್ತಾವನೆ ಪರಿಶೀಲನೆಯಲ್ಲಿದೆ.

ಈ) 1993-94ನೇ ಸಾಲಿನಲ್ಲಿ ಹೊಸ ಮೆಟ್ರಿಕ್ನಂತರದ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸುವ ಬಗ್ಗೆ ಆದೇಶ ಹೊರಡಿಸಿದ ನಂತರ ಗದಗ್ನಲ್ಲಿ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯದ ಅವಶ್ಯಕವಿದೆಯೆಂದು ಮನವಿ ಬಂದ ಕಾರಣ ಆ ಸಾಲಿನಲ್ಲಿ ಪರಿಗಣಿಸಲು ಸಾಧ್ಯವಾಗಲಿಲ್ಲ. ಆದಾಗ್ಯೂ ಪ್ರಸಕ್ತ ಸಾಲಿನಲ್ಲಿ ಹಣದ ಲಭ್ಯತೆಯನ್ನು ಆಧರಿಸಿ ವಿದ್ಯಾರ್ಥಿ ನಿಲಯವನ್ನು ಪ್ರಾರಂಭಿಸುವ ಬಗ್ಗೆ ಪರಿಶೀಲಿಸಲಾಗುವುದು.

ವಿವಿಧ ಸಮಿತಿಗಳ ವರದಿಯ ಪ್ರಕಾರ ಹೊಸದಾಗಿ ಗದಗ್ ಹಾಗೂ ಇನ್ನಿತರ ಜಿಲ್ಲೆಗಳ ರಚನೆ

328 - ಶ್ರೀ ಡಿ.ಆರ್. ಪಾಟೀಲ್ (ಗದಗ್) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಈ ರಾಜ್ಯದಲ್ಲಿನ ವಿವಿಧ ಸಮಿತಿಗಳು ಸಲ್ಲಿಸಿದ ವರದಿಯ ಪ್ರಕಾರ ಗದಗ್ ಹಾಗೂ ಇನ್ನಿತರ ಜಿಲ್ಲೆಗಳನ್ನು ಹೊಸದಾಗಿ ಯಾವಾಗ ರಚಿಸಲಾಗುವುದು;*

ಆ) *ಇದನ್ನು ಜಾರಿಗೊಳಿಸಲು ಸರ್ಕಾರಕ್ಕೆ ಇರುವ ತೊಂದರೆಗಳೇನು?*